# All India Radio: Bangalore
# National Bulletin In Kannada
# 22.02.2026 1.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಭವಿಷ್ಯದಲ್ಲಿ ಎಐ ಶಕ್ತಿ ಬಳಕೆ ದಿಕ್ಕಿನಲ್ಲಿ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ನಿರ್ಣಾಯಕ - ಪ್ರಧಾನಿ ನರೇಂದ್ರ ಮೋದಿ
2. ಕರ್ನಾಟಕದ ನಂಜನಗೂಡು ರಸಬಾಳೆ, ಮೈಸೂರು ವೀಳ್ಯದೆಲೆ, ಇಂಡಿ ನಿಂಬೆಹಣ್ಣು ಕುರಿತು ಮನ್ ಕಿ ಬಾತ್‌ನಲ್ಲಿ ಪ್ರಧಾನಿ ಪ್ರಸ್ತಾಪ
3. ೨೦೩೦ ರ ವೇಳೆಗೆ ಭಾರತ-ಬ್ರೆಜಿಲ್ ದ್ವಿಪಕ್ಷೀಯ ವ್ಯಾಪಾರ ೩೦ ಶತಕೋಟಿ ಡಾಲರ್‌ಗಳಿಗೆ ಹೆಚ್ಚಳದ ಗುರಿ
4. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್: ಸೂಪರ್ ಎಂಟರ ಹಂತದ ಪಂದ್ಯದಲ್ಲಿ ಇಂದು ಭಾರತ- ದಕ್ಷಿಣ ಆಫ್ರಿಕಾ ಮುಖಾಮುಖಿ

<><><><>

ದೆಹಲಿಯ ಭಾರತ ಮಂಟಪಂನಲ್ಲಿ ನಡೆದ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ನಾವೀನ್ಯಕಾರರು ಮತ್ತು ನವೋದ್ಯಮ ವಲಯಕ್ಕೆ ಸಂಬಂಧಿಸಿದ ತಜ್ಞರು, ಉದ್ಯಮಿಗಳು ಒಟ್ಟುಗೂಡಿದ್ದರು. ಮುಂಬರುವ ದಿನಗಳಲ್ಲಿ ಜಗತ್ತು ಎಐ ಶಕ್ತಿಯನ್ನು ಹೇಗೆ ಬಳಸಿಕೊಳ್ಳಲಿದೆ ಎಂಬ ದಿಕ್ಕಿನಲ್ಲಿ ಈ ಶೃಂಗಸಭೆ ಒಂದು ನಿರ್ಣಾಯಕ ಘಟ್ಟ ಎಂದೇ ಸಾಬೀತಾಗಿದೆ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನ ೧೩೧ನೇ ಆವೃತ್ತಿಯಲ್ಲಿ ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಅವರು ಹಂಚಿಕೊಂಡಿದ್ದಾರೆ. ಶೃಂಗಸಭೆಯಲ್ಲಿ ಎರಡು ಉತ್ಪನ್ನಗಳು ವಿಶ್ವದಾದ್ಯಂತದ ನಾಯಕರ ಮೇಲೆ ಹೆಚ್ಚಿನ ಪ್ರಭಾವ ಬೀರಿದವು. ಮೊದಲ ಉತ್ಪನ್ನ 'ಅಮುಲ್' ಮಳಿಗೆಯಲ್ಲಿತ್ತು. ಅದರಲ್ಲಿ ಎಐ ಹೇಗೆ ಪ್ರಾಣಿಗಳ ಚಿಕಿತ್ಸೆಯಲ್ಲಿ ನಮಗೆ ಸಹಾಯ ಮಾಡುತ್ತಿದೆ ಮತ್ತು ದಿನದ ೨೪ ಗಂಟೆ ಸಹಾಯದ ಮೂಲಕ ರೈತರು ತಮ್ಮ ಹಾಲಿನ ಉತ್ಪನ್ನ ಹಾಗೂ ಪಶುಗಳ ಲೆಕ್ಕವನ್ನು ಹೇಗೆ ನಿರ್ವಹಿಸುತ್ತಿದ್ದಾರೆ ಎಂಬುದನ್ನು ವಿವರಿಸಲಾಗಿತ್ತು ಎಂದು ಹೇಳಿದ್ದಾರೆ. ಎರಡನೇ ಉತ್ಪನ್ನವು ನಮ್ಮ ಸಂಸ್ಕೃತಿಗೆ ಸಂಬಂಧಿಸಿದ್ದಾಗಿತ್ತು. ಹೇಗೆ ಎಐನ ಸಹಾಯದಿಂದ ನಾವು ನಮ್ಮ ಪ್ರಾಚೀನ ಗ್ರಂಥಗಳನ್ನು, ನಮ್ಮ ಪ್ರಾಚೀನ ಜ್ಞಾನವನ್ನು, ನಮ್ಮ ಹಸ್ತಪ್ರತಿಗಳನ್ನು ಸಂರಕ್ಷಿಸುತ್ತಿದ್ದೇವೆ ಮತ್ತು ಇಂದಿನ ಪೀಳಿಗೆಗೆ ಅನುಗುಣವಾಗಿ ರೂಪಾಂತರಿಸುತ್ತಿದ್ದೇವೆ ಎಂಬುದನ್ನು ನೋಡಿ ಇಡೀ ವಿಶ್ವದ ನಾಯಕರು ಆಶ್ಚರ್ಯಚಕಿತರಾದರು. ಶೃಂಗಸಭೆ ವೇಳೆ ಪ್ರದರ್ಶನಕ್ಕಾಗಿ ಸುಶ್ರುತ ಸಂಹಿತೆಯನ್ನು ಆಯ್ಕೆ ಮಾಡಲಾಗಿತ್ತು. ಮೊದಲ ಹಂತದಲ್ಲಿ ತಂತ್ರಜ್ಞಾನದ ಸಹಾಯದಿಂದ ನಾವು ಹಸ್ತಪ್ರತಿಗಳ ಚಿತ್ರದ ಗುಣಮಟ್ಟವನ್ನು ಹೇಗೆ ಸುಧಾರಿಸಿ ಅವುಗಳನ್ನು ಓದಲು ಯೋಗ್ಯವಾಗಿಸುತ್ತಿದ್ದೇವೆ ಎಂಬುದನ್ನು ತೋರಿಸಲಾಯಿತು ಎಂದು ವಿವರಿಸಿದರು. ಎರಡನೇ ಹಂತದಲ್ಲಿ ಈ ಚಿತ್ರವನ್ನು ಯಂತ್ರಕ್ಕೆ ಓದಲು ಸಾಧ್ಯವಾಗುವ ಬರವಣಿಗೆಯಾಗಿ ಪರಿವರ್ತಿಸಲಾಯಿತು. ಮುಂದಿನ ಹಂತದಲ್ಲಿ machine-readable text ಅನ್ನು ಒಂದು AI avatar ಓದಿತು. ನಂತರದ ಹಂತದಲ್ಲಿ ತಂತ್ರಜ್ಞಾನದ ಮೂಲಕ ಈ ಅಮೂಲ್ಯ ಭಾರತೀಯ ಜ್ಞಾನವನ್ನು ಭಾರತೀಯ ಭಾಷೆಗಳಿಗೆ ಹಾಗೂ ವಿದೇಶಿ ಭಾಷೆಗಳಿಗೆ ಹೇಗೆ ಅನುವಾದಿಸಬಹುದು ಎಂಬುದನ್ನೂ ಪ್ರದರ್ಶಿಸಲಾಯಿತು. ಭಾರತದ ಪ್ರಾಚೀನ ಜ್ಞಾನವನ್ನು ಆಧುನಿಕ avatar ಮೂಲಕ ತಿಳಿದುಕೊಳ್ಳುವ ವಿಷಯದಲ್ಲಿ ವಿಶ್ವದ ನಾಯಕರು ಬಹಳ ಆಸಕ್ತಿ ತೋರಿಸಿದರು ಎಂದು ಪ್ರಧಾನಿ ತಿಳಿಸಿದರು. ಯಾವುದೇ ತಂದೆ-ತಾಯಿಗೆ ತಮ್ಮ ಮಗುವನ್ನು ಕಳೆದುಕೊಳ್ಳುವುದಕ್ಕಿಂತ ದೊಡ್ಡ ದುಃಖ ಮತ್ತೊಂದಿರಲು ಸಾಧ್ಯವಿಲ್ಲ. ಪುಟ್ಟ ಮಗುವನ್ನು ಕಳೆದುಕೊಳ್ಳುವ ನೋವು ಇನ್ನೂ ಆಳವಾದದ್ದು. ಕೆಲವು

ದಿನಗಳ ಹಿಂದೆ ಕೇರಳದ ೧೦ ತಿಂಗಳ ಮಗು ಆಲಿನ್ ಶೇರಿನ್ ಅಬ್ರಹಾಂ ಎಂಬ ಪುಟ್ಟ ಮಗು ಸಾವನ್ನಪ್ಪಿತು. ಆ ಮಗುವಿನ ತಂದೆ-ತಾಯಿಗೆ ಆಗುತ್ತಿರುವ ನೋವನ್ನು ಮಾತುಗಳಿಂದ ವ್ಯಕ್ತಪಡಿಸಲು ಸಾಧ್ಯವಿಲ್ಲ. ಆದರೆ, ಇಂತಹ ಅಗಾಧವಾದ ದುಃಖದ ನಡುವೆಯೂ ಆಲಿನ್ ತಂದೆ ಅರುಣ್ ಅಬ್ರಹಾಂ ಮತ್ತು ತಾಯಿ ಶೇರಿನ್ ಒಂದು ಮಹತ್ವದ ನಿರ್ಧಾರ ಕೈಗೊಂಡರು ಎಂದರು. ಆ ನಿರ್ಧಾರ ದೇಶದ ಪ್ರತಿಯೊಬ್ಬ ನಾಗರಿಕನ ಹೃದಯದಲ್ಲೂ ಅವರ ಬಗ್ಗೆ ಅಪಾರ ಗೌರವ ಮೂಡಿಸಿದೆ. ಅವರು ಆಲಿನ್ ಅವರ ಅಂಗಾಂಗ ದಾನದ ನಿರ್ಧಾರ ಮಾಡಿದರು. ಈ ಒಂದು ನಿರ್ಧಾರವೇ ಅವರ ಚಿಂತನೆ ಎಷ್ಟು ಉದಾತ್ತವಾಗಿದೆ ಮತ್ತು ಅವರ ವ್ಯಕ್ತಿತ್ವ ಎಷ್ಟು ವಿಶಾಲವಾದುದು ಎಂಬುದನ್ನು ಸಾಬೀತುಪಡಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಕೇರಳದ ತ್ರಿಶೂರ್ ಜಿಲ್ಲೆಯಲ್ಲಿ ಒಂದು ಗ್ರಾಮವಿದೆ, ಅಲ್ಲಿ ಒಂದೇ ಹೊಲದಲ್ಲಿ ೫೭೦ ವಿಧದ ಭತ್ತದ ತಳಿಯನ್ನು ಬೆಳೆಯಲಾಗುತ್ತಿದೆ. ಇದರಲ್ಲಿ ಸ್ಥಳೀಯ ತಳಿಗಳೂ ಇವೆ, ಗಿಡಮೂಲಿಕೆ ಪ್ರಬೇಧಗಳೂ ಇವೆ ಮತ್ತು ಇತರೆ ರಾಜ್ಯಗಳಿಂದ ತಂದ ತಳಿಗಳ ಜಾತಿಯೂ ಇವೆ. ಇದು ಕೇವಲ ಕೃಷಿಯಲ್ಲ, ಬೀಜಗಳ ಪರಂಪರೆಯನ್ನು ಸಂರಕ್ಷಿಸುವ ಬೃಹತ್ ಅಭಿಯಾನವೂ ಆಗಿದೆ. ರೈತರ ಕಠಿಣ ಪರಿಶ್ರಮದ ಫಲಿತಾಂಶ ಅಂಕಿ-ಅಂಶಗಳಲ್ಲೂ ಗೋಚರವಾಗುತ್ತಿದೆ ಎಂದು ಹೇಳಿದರು. ಭಾರತ ಇಂದು ವಿಶ್ವದಲ್ಲೇ ಅತ್ಯಂತ ದೊಡ್ಡ ಭತ್ತ ಉತ್ಪಾದಕ ರಾಷ್ಟ್ರವಾಗಿದೆ. ೧೫ ಕೋಟಿ ಟನ್‌ಗಿಂತಲೂ ಅಧಿಕ ಭತ್ತದ ಉತ್ಪಾದನೆ ಎನ್ನುವುದು ಕಡಿಮೆ ಸಾಧನೆಯೇನಲ್ಲ. ದೇಶದ ಅಗತ್ಯತೆಗಳನ್ನು ಪೂರೈಸುವುದರ ಜೊತೆಗೆ ವಿಶ್ವದ ಆಹಾರ ಪೂರೈಕೆಗೆ ಕೂಡಾ ಕೊಡುಗೆ ನೀಡುತ್ತಿದೆ ಎಂದು ತಿಳಿಸಿದರು. ಈ ಕೃಷಿ ಉತ್ಪನ್ನಗಳು ವಿಮಾನಗಳ ಮೂಲಕ ಕೂಡಾ ಸುಲಭವಾಗಿ ವಿದೇಶಗಳಿಗೆ ತಲುಪುತ್ತಿವೆ. ಕರ್ನಾಟಕದ ನಂಜನಗೂಡಿನ ರಸಬಾಳೆ, ಮೈಸೂರಿನ ವೀಳ್ಯದೆಲೆ, ಮತ್ತು ಇಂಡಿ ನಿಂಬೆಹಣ್ಣುಗಳನ್ನು ಮಾಲ್ದೀವ್ಸ್‌ಗೆ ಕಳಿಸಲಾಗುತ್ತಿದೆ. ಈ ಉತ್ಪನ್ನ ತಮ್ಮ ರುಚಿ ಮತ್ತು ಗುಣಮಟ್ಟಕ್ಕಾಗಿ ಹೆಸರಾಗಿದ್ದು, ಇವುಗಳಿಗೆ ಜಿಐ ಟ್ಯಾಗ್ ಕೂಡಾ ದೊರೆತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ.

<><><><>

ಭಾರತ ಮತ್ತು ಬ್ರೆಜಿಲ್ ೨೦೩೦ ರ ವೇಳೆಗೆ ತಮ್ಮ ದ್ವಿಪಕ್ಷೀಯ ವ್ಯಾಪಾರವನ್ನು ೩೦ ಶತಕೋಟಿ ಡಾಲರ್‌ಗಳಿಗೆ ಹೆಚ್ಚಿಸುವ ಮಹತ್ವದ ಗುರಿ ಹೊಂದಿವೆ. ಇದು ಈ ಹಿಂದೆ ಹೊಂದಲಾಗಿದ್ದ ೨೦ ಶತಕೋಟಿ ಡಾಲರ್‌ಗಳ ಗುರಿಗಿಂತ ದೊಡ್ಡ ಪ್ರಮಾಣದ್ದಾಗಿದೆ. ಈ ಕುರಿತು ಮಾಹಿತಿ ನೀಡಿರುವ ವಿದೇಶಾಂಗ ಸಚಿವಾಲಯದ ಪೂರ್ವ ವಿಭಾಗದ ಕಾರ್ಯದರ್ಶಿ ಪಿ.ಕುಮಾರನ್, ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡ ಸಿಲ್ವಾ ಅವರ ಭಾರತ ಭೇಟಿಯ ಸಂದರ್ಭದಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ತೈಲ, ಅನಿಲ, ನವೀಕರಿಸಬಹುದಾದ ಇಂಧನ, ಉಪಗ್ರಹ ಉಡಾವಣೆ, ಜೈವಿಕ ಇಂಧನ, ಕೃಷಿ, ಯೋಗ, ಜಾನುವಾರು ಮತ್ತು ಆರೋಗ್ಯ ರಕ್ಷಣೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉಭಯ ದೇಶಗಳ ನಡುವೆ ಸಂಬಂಧ ಬಲಪಡಿಸುವುದರ ಜೊತೆಗೆ ಆರ್ಥಿಕ ಬೆಳವಣಿಗೆಯನ್ನು ಉತ್ತೇಜಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಉತ್ತರ ಪ್ರದೇಶದ ಮೀರತ್‌ಗೆ ಭೇಟಿ ನೀಡಲಿದ್ದಾರೆ. ಶತಾಬ್ದಿ ನಗರ ನಮೋ ಭಾರತ್ ನಿಲ್ದಾಣದಲ್ಲಿ ಮೀರತ್ ಮೆಟ್ರೋ ಮತ್ತು ನಮೋ ಭಾರತ್ ರೈಲಿಗೆ ಪ್ರಧಾನಿ ಚಾಲನೆ ನೀಡಲಿದ್ದಾರೆ. ಇದೇ ವೇಳೆ ಅವರು ಮೀರತ್ ದಕ್ಷಿಣ ನಿಲ್ದಾಣದವರೆಗೆ ಮೆಟ್ರೋ ರೈಲಿನಲ್ಲಿ ಪ್ರಯಾಣಿಸಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ, ಪ್ರಧಾನಿ ಅವರು ಸುಮಾರು ೧೨ ಸಾವಿರ ೯೩೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ೮೨ ಕಿಲೋಮೀಟರ್ ಉದ್ದದ ದೆಹಲಿ-ಮೀರತ್ ನಮೋ ಭಾರತ್ ಕಾರಿಡಾರ್ ಮತ್ತು ದೇಶದ ಮೊದಲ ನಮೋ ಭಾರತ್ ಪ್ರಾದೇಶಿಕ ಕ್ಷಿಪ್ರ ಸಾರಿಗೆ

ವ್ಯವಸ್ಥೆಯ ಉಳಿದ ವಿಭಾಗಗಳನ್ನು ಅವರು ಉದ್ಘಾಟಿಸಲಿದ್ದಾರೆ. ಈ ಯೋಜನೆಗಳು ನಗರ ಚಲನಶೀಲತೆಯನ್ನು ಪರಿವರ್ತಿಸುವ ಮತ್ತು ನಾಗರಿಕರ ಜೀವನ ಸುಲಭತೆಯನ್ನು ಸುಧಾರಿಸುವ ತಡೆರಹಿತ, ಪರಿಣಾಮಕಾರಿ, ಆಧುನಿಕ ಮತ್ತು ಸುಸ್ಥಿರ ಸಾರ್ವಜನಿಕ ಸಾರಿಗೆ ವ್ಯವಸ್ಥೆಗಳನ್ನು ಖಚಿತಪಡಿಸಿಕೊಳ್ಳುವ ಪ್ರಧಾನಿ ನರೇಂದ್ರ ಮೋದಿಯವರ ದೃಷ್ಟಿಕೋನಕ್ಕೆ ಮತ್ತಷ್ಟು ಉತ್ತೇಜನ ನೀಡುತ್ತವೆ.

<><><><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ತಮಿಳುನಾಡಿಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ ಅವರು, ಮಧುರೈನ ವಂಡಿಯೂರಿನಲ್ಲಿ ತಿರು ವಿ.ಓ.ಚಿದಂಬರಂ ಪಿಳ್ಳೈ ಅವರ ಪ್ರತಿಮೆಗೆ ಶಿಲಾನ್ಯಾಸ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ನಂತರ, ಉಪರಾಷ್ಟ್ರಪತಿ ಅವರು ಶಿವಗಂಗೆಯ ತಿರುಕೋಷ್ಟಿಯೂರ್ ಸೌಮ್ಯ ನಾರಾಯಣ ಪೆರುಮಾಳ್ ದೇವಸ್ಥಾನ ಮತ್ತು ರಾಣಿ ವೇಲು ನಾಚಿಯಾರ್ ಅರಮನೆಗೆ ಭೇಟಿ ನೀಡಲಿದ್ದಾರೆ.

<><><><>

ಪಾಕಿಸ್ತಾನ-ಅಫ್ಘಾನಿಸ್ತಾನ ಗಡಿ ಪ್ರದೇಶದ ನಾಗರಿಕ ವಸತಿ ಪ್ರದೇಶಗಳನ್ನು ಗುರಿಯಾಗಿಸಿಕೊಂಡು ಪಾಕಿಸ್ತಾನ ವಾಯುಪಡೆ ನಡೆಸಿದ ವಾಯುದಾಳಿಯಲ್ಲಿ ಕನಿಷ್ಠ ೧೭ ಅಫ್ಘಾನ್ ನಾಗರಿಕರು ಮೃತಪಟ್ಟಿದ್ದು, ೧೨ ಮಂದಿ ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

<><><><>

ಅಮೆರಿಕದ ಸುಪ್ರೀಂ ಕೋರ್ಟ್‌ನಲ್ಲಿ ದೊಡ್ಡ ಹಿನ್ನಡೆಯ ನಂತರ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜಾಗತಿಕ ಸುಂಕಗಳನ್ನು ಶೇಕಡಾ ೧೦ ರಿಂದ ೧೫ ಕ್ಕೆ ಏರಿಕೆ ಮಾಡಿದ್ದಾರೆ. ಅಮೆರಿಕದ ಸುಪ್ರೀಂ ಕೋರ್ಟ್ ತನ್ನ ತೀರ್ಪಿನಲ್ಲಿ, ಅಂತಾರಾಷ್ಟ್ರೀಯ ತುರ್ತು ಆರ್ಥಿಕ ಅಧಿಕಾರ ಕಾಯ್ದೆಯು ಅಮೆರಿಕ ಅಧ್ಯಕ್ಷರಿಗೆ ಆಮದುಗಳ ಮೇಲೆ ಸುಂಕಗಳನ್ನು ವಿಧಿಸುವ ಅಧಿಕಾರವನ್ನು ನೀಡುವುದಿಲ್ಲ ಎಂದು ಹೇಳಿದೆ.

<><><><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಸೂಪರ್ ೮ರ ಹಂತದ ಪಂದ್ಯದಲ್ಲಿ ಭಾರತ ತಂಡ, ದಕ್ಷಿಣ ಆಫ್ರಿಕಾ ವಿರುದ್ಧ ಸೆಣಸಲಿದೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>